ಅಂತೆಯೇ ಉಪಕರಣಗಳ ಕೊರತೆ ಇದೆಯಾದರೂ ಅವುಗಳನ್ನು ಖರೀದಿಸುವ ಕ್ರಮವನ್ನು ತೆಗೆದುಕೊಳ್ಳಲಾಗಿದೆ. ಅಂತೆಯೇ ಹಳೆಯ ಕಟ್ಟಡಗಳು ದುರಸ್ಥಿ ಕಾರ್ಯ ಪ್ರಗತಿಯಲ್ಲಿದೆ. ಮತ್ತು ಬೌರಿಂಗ್ ಮತ್ತು ವಿಕ್ಟೋರಿಯಾ ಆಸ್ಪತ್ರೆಗಳಲ್ಲಿ ಹೊಸ ಬಹುಮಹಡಿಗಳ ಕಟ್ಟಡ ಅಸ್ತಿತ್ವಕ್ಕೆ ಬಂದಿವೆ.

ಈ) ಸರ್ಕಾರ ಜಾರಿಗೆ ತರಲು ಉದ್ದೇಶಿಸಿರುವ ಖಾಸಗಿ ನರ್ಸಿಂಗ್ ಹೋಂಗಳ ನಿಯಂತ್ರಣ ಕಾಯಿದೆಯಲ್ಲಿ ಈ ಬಗ್ಗೆ ಸೂಕ್ತ ಅವಕಾಶ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಶೌಚಾಲಯ ಹೊಂದಿಲ್ಲದ ಜಿಲ್ಲಾ ಪಂಚಾಯ್ತಿ ತಾಲ್ಲೂಕು ಪಂಚಾಯ್ತಿ ಹಾಗೂ ಗ್ರಾಮ ಪಂಚಾಯ್ತಿ ಸದಸ್ಯರು

682 - ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮನೆಗಳಲ್ಲಿ ಸ್ವಂತ ಶೌಚಾಲಯವನ್ನು ಹೊಂದಿಲ್ಲದ ಜಿಲ್ಲಾ ಪಂಚಾಯ್ತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯಿತಿ ಸದಸ್ಯರುಗಳ ಸಂಖ್ಯೆ ಎಷ್ಟು?*

ಆ) *ಶೌಚಾಲಯವನ್ನು ಹೊಂದಿಲ್ಲದ ಸದಸ್ಯರ ಸದಸ್ಯತ್ವವನ್ನು ರದ್ದುಪಡಿಸದಿರಲು ಮಸೂದೆಗೆ ತಿದ್ದುಪಡಿಯನ್ನು ತರಲು ಸರ್ಕಾರದವರು ಕ್ರಮಕೈಗೊಳ್ಳುವರೆ?*

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು) :

ಅ) ಜಿಲ್ಲಾ ಪಂಚಾಯ್ತಿ - 160

ತಾಲ್ಲೂಕು ಪಂಚಾಯ್ತಿ - 1048

ಗ್ರಾಮ ಪಂಚಾಯ್ತಿ - 43,368

ಆ) ಕಾಲಾವಕಾಶ ವಿಸ್ತರಿಸುವ ಬಗ್ಗೆ ಪರಿಶೀಲಿಸಲಾಗುವುದು.

ಬೆಂಗಳೂರಿನಲ್ಲಿ ಆಸ್ಪತ್ರೆಗಳು ಹೊರ ಹಾಕುವ ತ್ಯಾಜ್ಯ ವಸ್ತುಗಳ ನಿರ್ವಹಣೆ

685- ಶ್ರೀ ಎಸ್. ಸುರೇಶ್ ಕುಮಾರ್ (ರಾಜಾಜಿನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕರ್ನಾಟಕದಲ್ಲಿ ವಿಶೇಷವಾಗಿ ಬೆಂಗಳೂರಿನಲ್ಲಿ ಆಸ್ಪತ್ರೆಗಳು ಹೊರಹಾಕುವ ತ್ಯಾಜ್ಯ ವಸ್ತುಗಳನ್ನು ನಾಶಪಡಿಸುವುದರ ಬಗ್ಗೆ ಹಾಗೂ ಈ ತ್ಯಾಜ್ಯ ವಸ್ತುಗಳ ಸಮಗ್ರ ನಿರ್ವಹಣೆ ಯೋಜನೆಯನ್ನೇನಾದರೂ ರೂಪಿಸಲಾಗಿದೆಯೇ?*

ಆ) *ಹಾಗಿದ್ದಲ್ಲಿ ಇದರ ಬಗ್ಗೆ ಸರ್ಕಾರವು ಇದರ ವಿರುದ್ಧ ತೆಗೆದುಕೊಂಡಿರುವ ಕ್ರಮಗಳೇನು?*

ಡಾ|| ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಆಸ್ಪತ್ರೆಗಳು ಹೊರಹಾಕುವ ತ್ಯಾಜ್ಯ ವಸ್ತುಗಳನ್ನು ನಾಶಪಡಿಸಲು ಇನ್‌ಸಿನರೇಟರ್ ಯಂತ್ರ (ದಹನ ಯಂತ್ರ) ಹಾಗೂ ಫ್ಲೈರೋಲೇಟರ್‌ಗಳನ್ನು ಕರ್ನಾಟಕ ರಾಜ್ಯದ ಪ್ರಮುಖ ಆಸ್ಪತ್ರೆಗಳಲ್ಲಿ ಅಳವಡಿಸಲಾಗಿದೆ. ಬೆಂಗಳೂರಿನಲ್ಲಿ ಬೌರಿಂಗ್ ಆಸ್ಪತ್ರೆ, ವಿಕ್ಟೋರಿಯಾ ಹಾಗೂ ವಾಣಿವಿಲಾಸ ಆಸ್ಪತ್ರೆ, ಎಸ್.ಡಿ.ಎಸ್. ಸ್ಯಾನಿಟೋರಿಯಂ ದಹನ ಯಂತ್ರವನ್ನು ಅಳವಡಿಸಲಾಗಿದೆ.

ಆ) ಕರ್ನಾಟಕ ರಾಜ್ಯದಲ್ಲಿ ಆಸ್ಪತ್ರೆಗಳು ಹೊರಹಾಕುವ ತ್ಯಾಜ್ಯ ವಸ್ತುಗಳನ್ನು ಬಯೋಮಿಥಿನೇಷನ್ ಯಂತ್ರದ ಮೂಲಕ ನಾಶಪಡಿಸಿ ಬಯೋಗ್ಯಾಸ್ ಉತ್ಪಾದಿಸಿ ಈ ಅನಿಲವನ್ನು ಆಯಾ ಆಸ್ಪತ್ರೆಗಳ ಅಡಿಗೆ ಇಂಧನಕ್ಕಾಗಿ ಉಪಯೋಗಿಸುವಂತಹ ಒಂದು ಯೋಜನೆಯನ್ನು ಕರ್ನಾಟಕ ರಿನ್ಯೂಯಬಲ್ ಎನರ್ಜಿ ಡೆವಲಪ್‌ಮೆಂಟ್ ಲಿಮಿಟೆಡ್ ಮೂಲಕ ಕೈಗೊಳ್ಳಲು ಪರಿಶೀಲನೆ ನಡೆಸಲಾಗುತ್ತಿದೆ.

ಶಿಕ್ಷಕರ ನೇಮಕಾತಿ ಕುರಿತು

686 - ಇ. ಮಾರುತಿರಾವ್ ಪವಾರ್ (ನರಸಿಂಹರಾಜ) : ಮಾನ್ಯ ಪ್ರಾಥಮಿಕ, ಪ್ರೌಢ ಮತ್ತು ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1996-97, 97-98ರ ಅವಧಿಯಲ್ಲಿ ಶಿಕ್ಷಕರ ನೇಮಕಾತಿ ಮಾಡುವಲ್ಲಿ ಯಾವ ಆಧಾರದ ಮೇಲೆ ನೇಮಕಾತಿ ಮಾಡಲಾಗಿದೆ. 98-99ನೇ ಸಾಲಿನಲ್ಲಿ ಎಷ್ಟು ಶಿಕ್ಷಕರನ್ನು ನೇಮಿಸಿಕೊಳ್ಳಲು ಕ್ರಮ ತೆಗೆದುಕೊಳ್ಳಲಾಗಿದೆ?

ಆ) ಈ ಮೇಲ್ಕಂಡ ಶಿಕ್ಷಕರ ನೇಮಕಾತಿಯನ್ನು ಶೇಕಡವಾರು ಗಳಿಸಿದ ಅಂಕಗಳು ಅಥವಾ ವಯಸ್ಸಿನ ಆಧಾರವನ್ನು ಇಟ್ಟುಕೊಂಡು ಆಯ್ಕೆ ಮಾಡಲಾಗುತ್ತಿದೆಯೇ? ಈಗಾಗಲೇ ಹಲವಾರು ಅಭ್ಯರ್ಥಿಗಳ ವಯೋಮಿತಿ ಮೀರುತ್ತಿದ್ದು ಉದ್ಯೋಗ ದೊರಕುವಲ್ಲಿ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) 1998-99ರ ಶಿಕ್ಷಕರ ನೇಮಕಾತಿಯಲ್ಲಿ ಶೇಕಡ50ರಷ್ಟು ವಯೋಮಿತಿ ಆಧಾರ ಹಾಗೂ ಶೇಕಡ 50ರಷ್ಟು ಗಳಿಸಿದ ಅಂಕಗಳ ಅನ್ವಯ ನೇಮಕ ಮಾಡುವಲ್ಲಿ ಸರ್ಕಾರದ ನಿಲುವೇನು?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ, ಪ್ರೌಢ ಮತ್ತು ಉನ್ನತ ಶಿಕ್ಷಣ ಸಚಿವರು) :

ಅ) 1996-97ನೇ ಸಾಲಿನಲ್ಲಿ ಮೆರಿಟ್ ಆಧರಿಸಿ ಮತ್ತು ಮೀಸಲಾತಿ ನಿಯಮಗಳನ್ವಯ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರ ನೇಮಕಾತಿ ಮಾಡಲಾಗಿದೆ. 98-99ನೇ ಸಾಲಿನಲ್ಲಿಯೂ 29,301 ಪ್ರಾಥಮಿಕ ಶಾಲಾ ಶಿಕ್ಷಕರು ಹಾಗೂ 3,787 ಪ್ರೌಢ ಶಾಲಾ ಶಿಕ್ಷಕರ ನೇಮಕ ಮಾಡಲು ಉದ್ದೇಶಿಸಿದೆ.